**ಕರ್ನಾಟಕ ಸರ್ಕಾರ**

ಕ್ರಮಾಂಕ: ಇಡಿ 402 ಯುಬಿವಿ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-08-2009.

**ಇಂದ:**
ಸರ್ಕಾರದ ಕಾರ್ಯದರ್ಶಿ, (ಉನ್ನತ ಶಿಕ್ಷಣ)
ಶಿಕ್ಷಣ ಇಲಾಖೆ,
ಬೆಂಗಳೂರು-560 001.

**ಇವರಿಗೆ:**
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
**ಬೆಂಗಳೂರು – 560 056.**

ಮಾನ್ಯರೇ,

**ವಿಷಯ: 2009-10ನೇ ಶೈಕ್ಷಣಿಕ ಸಾಲಿಗೆ ಕೋಲಾರ ಜಿಲ್ಲೆಯ ಮಾಲೂರಿನ ಮಾನಸ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್‌ಗೆ ಹೊಸ ಸಂಯೋಜನೆ.**

**ಉಲ್ಲೇಖ: ತಮ್ಮ ಪತ್ರ ಸಂಖ್ಯೆ:ಎಸಿಎ-3/ಎ3/ಹೊಕಾಪ್ರ/2009-2010, ದಿನಾಂಕ: 06-06-2009.**

*****

1) **ಕೋಲಾರ ಜಿಲ್ಲೆಯ ಮಾಲೂರಿನ ಶ್ರೀ ವೆಂಕಟೇಶ್ವರ ಎಜುಕೇಷನಲ್ ಟ್ರಸ್ಟ್,** 2009-10ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ **ಮಾನಸ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್‌ಅನ್ನು** ಮಾಲೂರಿನಲ್ಲಿ ಸ್ಥಾಪಿಸಿ ಪ್ರಾರಂಭಿಸಲು ಸಂಯೋಜನೆ ಕೋರಿ, **ಬೆಂಗಳೂರು ವಿಶ್ವವಿದ್ಯಾಲಯಕ್ಕೆ** ಸಲ್ಲಿಸಿದ ಅರ್ಜಿಯನ್ನು ಬೆಂಗಳೂರು **ವಿಶ್ವವಿದ್ಯಾಲಯದ** ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ದ 59ನೇ ಪ್ರಕರಣದ (11)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ಮೇಲ್ಕಂಡ ಕಾಲೇಜನ್ನು ಕೆಳಕಂಡ ಪದವಿ ಕೋರ್ಸ್‌ಗಳು ಮತ್ತು ಕೆಳಗೆ ನಿಗಧಿಪಡಿಸಿರುವ ವಿಷಯ ಸಮೂಹ ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ 2009-10ನೇ ಶೈಕ್ಷಣಿಕ** ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರ. ಸಂ. | ಕೋರ್ಸ್ | ಭಾಷೆಗಳು/ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಬಿ.ಸಿ.ಎ | **ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ** | **40 (ನಲವತ್ತು)** |
| 2. | ಬಿ.ಬಿ.ಎಂ | **ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ** | **40 (ನಲವತ್ತು)** |

**ಷರತ್ತುಗಳು:-**

(1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದು ಶಾಶ್ವತ ಅನುದಾನರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು;

(2) ಶಾಶ್ವತ ಅನುದಾನರಹಿತ ಷರತ್ತಿಗೆ ಒಳಪಡಲು ಸಂಸ್ಥೆಯು ಮಧ್ಯಂತರ ಒಪ್ಪಂದ ಪತ್ರದಲ್ಲಿನ ನಿಭಂದನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

(3) ಮೇಲ್ಕಂಡ ಕಾಲೇಜು **ಬೆಂಗಳೂರು ವಿಶ್ವವಿದ್ಯಾಲಯದ** ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

(4) ನಿಗಧಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.

(5) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

(6) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

(7) ಕಾಲೇಜು/ಆಡಳಿತ ಮಂಡಳಿಯು ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

(8) ದಿನಾಂಕ:13-08-1997ರಂದು ವಿಶಾಖ V/s ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಬೆಯನ್ನು ಉಂಟುಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆ ಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

(9) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದ ಯುತವಾಗಿ ಕಾಣತಕ್ಕದ್ದು;

(10) ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

(11) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದ್ದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

(12) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

(13) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(14) ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

ತಮ್ಮ ನಂಬುಗೆಯ,

(ಬಿ.ಎಸ್. ಜಾಪಾಲಿ)
ಸರ್ಕಾರದ ಉಪ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ).

ಪ್ರತಿ ಇವರಿಗೆ:

(1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001.
(2) ಕಾಲೇಜು ಶಿಕ್ಷಣ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು.
(3) ಕಾರ್ಯದರ್ಶಿ, ಶ್ರೀ ವೆಂಕಟೇಶ್ವರ ಎಜುಕೇಷನಲ್ ಟ್ರಸ್ಟ್, ಮಾನಸ ಹಾಸ್ಪಿಟಲ್, ಅರಳೇರಿ ರಸ್ತೆ, ಮಾಲೂರು –563 130, ಕೋಲಾರ ಜಿಲ್ಲೆ.
(4) ಪ್ರಾಂಶುಪಾಲರು, ಮಾನಸ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಅಂಡ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಮಾನಸ ಹಾಸ್ಪಿಟಲ್, ಅರಳೇರಿ ರಸ್ತೆ, ಮಾಲೂರು –563 130, ಕೋಲಾರ ಜಿಲ್ಲೆ.